# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಸಭಾಧ್ಯಕ್ಷರವರು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 22/02/2020

### ಶಾಸಕರ ಭವನಕ್ಕೆ ಮಾಧ್ಯಮ ಪ್ರತಿನಿಧಿಗಳ ಪ್ರವೇಶವಿಲ್ಲ



ಬೆಂಗಳೂರು: ವಿಧಾನಮಂಡಲ ಕಲಾಪದ ಚಿತ್ರೀಕರಣದಿಂದ ಮಾಧ್ಯಮಗಳ ಕ್ಯಾಮೆರಾ ದೂರ ಇಟ್ಟಿರುವ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಈಗ ಮಾಧ್ಯಮಗಳ ಮೇಲೆ ಮತ್ತೊಂದು ರೀತಿಯಲ್ಲಿ ನಿರ್ಬಂಧ ಹೇರಿದ್ದು ಶಾಸಕರ ಭವನಕ್ಕೆ ದೃಶ್ಯ, ಮುದ್ರಣ ಮಾಧ್ಯಮಗಳ ಪತ್ರಕರ್ತರಿಗೆ ಪ್ರವೇಶ ನಿರಾಕರಿಸಿದ್ದಾರೆ. ಮೊದಲು ಶಾಸಕರ ಭವನಕ್ಕೆ ಪತ್ರಕರ್ತರಿಗೆ ಮುಕ್ತ ಪ್ರವೇಶ ಇತ್ತು. ಈಗ ಶಾಸಕರ ಖಾಸಗಿತನಕ್ಕೆ ತೊಂದರೆಯಾಗುತ್ತದೆ. ಶಾಸಕರು ಸಂದರ್ಶನಕ್ಕೆ ಒಪ್ಪಿಗೆ ಕೊಟ್ಟರೆ ಮಾತ್ರ ಶಾಸಕರ ಭವನ ಪ್ರವೇಶಿಸಬಹುದು. ಈ ಮೊದಲು ಶಾಸಕರ ಭವನದಲ್ಲಿನ ಅವ್ಯವಸ್ಥೆ, ಶಾಸಕರ ಬೆಂಬಲಿಗರ ಪುಂಡಾಟ ಸೇರಿ ಹಲವು ವಿಚಾರಗಳ ಬಗ್ಗೆ ಮಾಧ್ಯಮಗಳಲ್ಲಿ ಸುದ್ದಿ ಪ್ರಕಟವಾಗಿದ್ದವು. ಹೀಗಾಗಿ ಶಾಸಕರು, ಶಾಸಕರ ಬೆಂಬಲಿಗರ ಚಲನವಲನಗಳು ಮೀಡಿಯಾ ಕಣ್ಣಿಗೆ ಬೀಳಬಾರದು? ಎಂಬ ಉದ್ದೇಶ ಸ್ಪೀಕರ್ ಆದೇಶದ ಹಿಂದಿದೆಯೇ? ಎನ್ನಲಾಗಿದೆ.